<table>
<tr><td colspan="3">ಕರ್ನಾಟಕ ಸರ್ಕಾರ (ಸಿ.ಆರ್.ಪಿ-67)</td></tr>
<tr><td rowspan="4">ಹೇಳಿಕೆ ಹಾಳೆ (ಆರ್.ಸಿ. ಸಂಖ್ಯೆ 57) ನಮೂನೆ ಸಂಖ್ಯೆ 4</td><td colspan="3">ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ, ಚನ್ನಪಟ್ಟಣ</td></tr>
<tr><td colspan="3">ಸಿ.ಸಿ ನಂ. 1211/2023</td></tr>
<tr><td></td><td>ಸಿ.ಡಬ್ಲ್ಯೂ</td><td>13</td></tr>
<tr><td></td><td>ಪಿ.ಡಬ್ಲ್ಯೂ</td><td>6</td></tr>
<tr><td>ಸಾಕ್ಷಿದಾರರ ಹೆಸರು</td><td colspan="3">ಮುಜೀದ್ ಪಾಷಾ ಬಿನ್ ಅಬ್ದುಲ್ ಕರೀಮ್</td></tr>
<tr><td>ವಯಸ್ಸು</td><td colspan="3">52 ವರ್ಷ</td></tr>
<tr><td>ಉದ್ಯೋಗ</td><td colspan="3">ಖಾಸಗಿ ಕೆಲಸ</td></tr>
<tr><td>ವಾಸಸ್ಥಳ</td><td colspan="3">ಮದ್ದೂರು</td></tr>
</table>

**ದಿನಾಂಕಃ- 02.02.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

**ಮುಖ್ಯ ವಿಚಾರಣೆಃ- ಸಹಾಯಕ ಸರ್ಕಾರಿ ಅಭಿಯೋಜಕರಿಂದ**

1) ಸಾಕ್ಷಿಯು ನಿಪಿ.2 ಸ್ಥಳ ಪಂಚನಾಮೆ ಮತ್ತು ಅದರ ಮೇಲೆ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ.3 ಅಮಾನತ್ತು ಪಂಚನಾಮೆ ಮತ್ತು ಅದರ ಮೇಲೆ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.3(ಬಿ) ಎಂದು ಗುರುತಿಸಲಾಯಿತು. ನಿಪಿ.2 ಮತ್ತು 3 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಿಪಿ.2 ಮತ್ತು 3 ಕ್ಕೆ ಪೊಲೀಸರ ಕೋರಿಕೆಯ ಮೇರೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ.

**ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಅನುಮತಿ ಕೋರಿದ್ದು, ಕೋರಿಕೆಯ ಮೇರೆಗೆ ಅನುಮತಿ ನೀಡಲಾಗಿದೆ.**

**ಪಾಟೀ ಸವಾಲುಃ- ಸಹಾಯಕ ಸರ್ಕಾರಿ ಅಭಿಯೋಜಕರಿಂದ**

1) ದಿಃ-19.12.2021 ರಂದು ಪೊಲಿಸರು ಗುನ್ನಾ ಸ್ಥಳಕ್ಕೆ ಬಂದು ಅಲ್ಲಿ ಚಾಸಾ-1 ರವರು ತೋರಿಸಿದ ಜಾಗದಲ್ಲಿ ನನ್ನ ಸಮಕ್ಷಮ ನಿಪಿ.2 ರಂತೆ ಪಂಚನಾಮೆಯನ್ನು ಸ್ಥಳದಲ್ಲಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ತದನಂತರ ಅಪಘಾತಕ್ಕೆ ಒಳಪಟ್ಟ ವಾಹನವನ್ನು ಅದೇ ದಿನ ಸಂಜೆ 04.00 ರಿಂದ 04.45 ರ ಸಮಯದಲ್ಲಿ ನನ್ನ ಮತ್ತು ಚಾಸಾ-14 ರವರ ಸಮಕ್ಷಮ ಜಪ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಪಂಚನಾಮೆಗೆ ಸ್ಥಳದಲ್ಲಿಯೇ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಆರೋಪಿತನು ನನಗೆ ಪರಿಚಯ ಇದ್ದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

**ಪಾಟೀ ಸವಾಲುಃ- ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಣ ಮಾಡಲಾಯಿತು.)**

**ಓ.ಹೇ.ಕೆ.ಸರಿ ಇದೆ.**

**ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ.ದಂ.ಗಳು**
**ಚನ್ನಪಟ್ಟಣ**